**ಕರ್ನಾಟಕ ಸರ್ಕಾರ**

No:HFW/06/PRS/2023

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ, ಬೆಂಗಳೂರು
ದಿನಾಂಕ: 20.3.2023

**ಸುತ್ತೋಲೆ**

ವಿಷಯ: ಕೋವಿಡ್ 19 ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಕುರಿತು.

ಉಲ್ಲೇಖ: ಶ್ರೀ ರಾಜೇಶ್ ಭೂಷಣ್, ಐ ಎ ಎಸ್, ಕಾರ್ಯದರ್ಶಿಗಳು, ಭಾರತ ಸರ್ಕಾರ, ಆರೋಗ್ಯ ಮತ್ತುಕುಟುಂಬ ಕಲ್ಯಾಣ ಮಂತ್ರಾಲಯ, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: No. Z 28015/19/2022-DM Cell , ದಿನಾಂಕ: 16.3.2023.

ಕರ್ನಾಟಕ ರಾಜ್ಯದಲ್ಲಿ ಕಳೆದ 5 ತಿಂಗಳುಗಳಿಂದ ಕೋವಿಡ್ 19 ಪರಿಸ್ಥಿತಿಯು ನಿಯಂತ್ರಣದಲ್ಲಿದೆ. ಆದಾಗ್ಯೂ, ದಿನಾಂಕ: 8.3.2023ಕ್ಕೆ ಮುಕ್ತಾಯಗೊಂಡ ವಾರದಲ್ಲಿ 493 ಪ್ರಕರಣಗಳು ವರದಿಯಾಗಿದ್ದು, ದಿನಾಂಕ: 15.3.2023ಕ್ಕೆ ಮುಕ್ತಾಯಗೊಂಡ ವಾರದಲ್ಲಿ 604 ಪ್ರಕರಣಗಳು ವರದಿಯಾಗಿವೆ. ಇದರಿಂದ, ರಾಜ್ಯದ ಕೋವಿಡ್ 19 ಪ್ರಕರಣಗಳ ಪಾಸಿಟಿವಿಟಿ ಪ್ರಮಾಣವು 2.77% ಆಗಿದ್ದು, ಇದೇ ಅವಧಿಯಲ್ಲಿ ಭಾರತ ದೇಶದ ಪಾಸಿಟಿವಿಟಿ ಪ್ರಮಾಣ 0.61% ಆಗಿರುತ್ತದೆ. ಅದರಂತೆ, ರಾಜ್ಯದ ಶಿವಮೊಗ್ಗ, ಕಲಬುರಗಿ, ಮೈಸೂರು ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಳೆದ ಕೆಲವು ವಾರಗಳಲ್ಲಿ ಹೆಚ್ಚಿನ ಖಚಿತ ಪ್ರಕರಣಗಳು ವರದಿಯಾಗಿರುವುದನ್ನು ಗಮನಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಪ್ರಸಕ್ತ ಕೋವಿಡ್ 19 ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ನಿಗಾವಣೆಯಲ್ಲಿರಿಸಿ ಅಗತ್ಯ ಕ್ರಮಗಳನ್ನು ಅನುಷ್ಠಾನಗೊಳಿಸುವುದು ಅವಶ್ಯವಾಗಿದೆ. ಭಾರತ ಸರ್ಕಾರದ ಶಿಫಾರಸ್ಸಿನಂತೆ,ಈಗಾಗಲೇ ಚಾಲ್ತಿಯಲ್ಲಿರುವ ಟೆಸ್ಟ್, ಟ್ರೇಸ್, ಟ್ರ್ಯಾಕ್,ಟ್ರೀಟ್ ಹಾಗೂ ಲಸಿಕಾ ಕಾರ್ಯಕ್ರಮದ ಯಶಸ್ವಿ ಅನುಷ್ಠಾನದ ಜೊತೆಗೆ ಜಿಲ್ಲೆಗಳಲ್ಲಿ ಈ ಕೆಳಗಿನ ಅಂಶಗಳಿಗೆ ಗಮನಹರಿಸಲು ಸೂಚಿಸಿದೆ.

- ನಿಗದಿತ ಗುರಿಯಂತೆ, ಕೋವಿಡ್ 19 ಪ್ರಕರಣಗಳ ಪರೀಕ್ಷೆ ನಡೆಸುವುದು.
- ಹೊಸದಾಗಿ ಹಾಗೂ ಕ್ಲಸ್ಟರ್ ಮಾದರಿಯಲ್ಲಿ ವರದಿಯಾಗುವ ಕೋವಿಡ್ 19 ಪ್ರಕರಣಗಳ ಮೇಲ್ವಿಚಾರಣೆ ನಡೆಸುವುದು.
- ಕೋವಿಡ್ 19 ಸೋಂಕು ಹರಡುವುದನ್ನು ತಡೆಗಟ್ಟಲು ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ, ನಿಯಮಿತವಾಗಿ ಎಚ್ಚರಿಕೆ ಚಿಹ್ನೆಗಳನ್ನು (early warning signals) ಐಎಲ್ ಐ ಹಾಗೂ ಪ್ರಕರಣಗಳನ್ನು ಪತ್ತೆಹಚ್ಚಿ ಉಸ್ತುವಾರಿಯನ್ನು ನಡೆಸಬೇಕು.
- ಅಂತರರಾಷ್ಟ್ರೀಯ ಪ್ರಯಾಣಿಕರು, ಸ್ಥಳೀಯವಾಗಿ ವರದಿಯಾಗುವ ಕ್ಲಸ್ಟರ್ ಪ್ರಕರಣಗಳು ಹಾಗೂ ಸೆಂಟಿನೆಲ್ ಸೈಟ್‌ಗಳಲ್ಲಿ ಸಂಗ್ರಹಿಸಲಾಗುವ ಮಾದರಿಗಳನ್ನು, ಚಾಲಿಯಲ್ಲಿರುವ ಶಿಷ್ಟಾಚಾರದಂತೆ ಜೀನೋಮ್ ಸೀಕ್ವೆನ್ಸಿಂಗ್ ನಡೆಸುವುದು.

- ಅರ್ಹ ಜನರಿಗೆ precaution doseನ ನೀಡಿಕೆಯ ಪ್ರಮಾಣವನ್ನು ಹೆಚ್ಚಿಸುವುದು.
- ಮುಚ್ಚಿದ ಸಂರಕ್ಷಣೆಗಳು ಹಾಗೂ ಜನಸಂದಣಿ ಇರುವ ಪ್ರದೇಶಗಳಲ್ಲಿ Covid Appropriate Behavior (CAB) ನ ಪಾಲನೆಯನ್ನು ಖಚಿತಪಡಿಸಿಕೊಳ್ಳುವುದು.

ಜಿಲ್ಲೆಗಳಲ್ಲಿ ಬದಲಾಗುತ್ತಿರುವ ಕೋವಿಡ್ 19 ಪರಿಸ್ಥಿತಿಯ ಹಿನ್ನೆಲೆಯಲ್ಲಿ, ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಾ, ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಈ ಮೂಲಕ ಸೂಚಿಸಿದೆ.

( ಟಿ ಕೆ ಅನಿಲ್ ಕುಮಾರ್)
ಸರ್ಕಾರದ ಕಾರ್ಯದರ್ಶಿಗಳು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ,

1. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು – ಜಿಲ್ಲಾ ಪಂಚಾಯತ್, ಎಲ್ಲಾ ಜಿಲ್ಲೆಗಳು
3. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
4. ಜಿಲ್ಲಾ ಶಸ್ತ್ರಚಿಕಿತ್ಸಕರು , ಎಲ್ಲಾ ಜಿಲ್ಲೆಗಳು
5. ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು, ಎಲ್ಲಾ ಜಿಲ್ಲೆಗಳು

ಪ್ರತಿಯನ್ನು ಮಾಹಿತಿಗಾಗಿ ಕಳುಹಿಸಿದೆ.

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಬೆಂಗಳೂರು.
2. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಸೌಧ, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಬೆಂಗಳೂರು.